**Akashvani : Bangalore**
**Regional Bulletin In Kannada**
**07.10.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**07.10.2025 / 2.30 pm**

**<><*<><>*><>**

ಮುಖ್ಯಾಂಶಗಳು

೧. ಕುರುಬರನ್ನು ಪರಿಶಿಷ್ಟ ಜನಾಂಗಕ್ಕೆ ಸೇರಿಸಿದರೆ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕು - ಮುಖ್ಯಮಂತ್ರಿ ಅಭಿಮತ

೨. ರಾಜ್ಯಾದ್ಯಂತ ಇಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

೩. ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ಅವಧಿ ವಿಸ್ತರಿಸಿದ ರಾಜ್ಯಸರ್ಕಾರ

೪. ಎಸ್‌ಎಸ್‌ಎಲ್‌ಸಿ ಪರೀಕ್ಷಾ ಶುಲ್ಕ ಹೆಚ್ಚಳ ; ಸರ್ಕಾರದ ವಿರುದ್ಧ ಬಿಜೆಪಿ ಅಸಮಾಧಾನ

*****************

ಇಂದು ವಾಲ್ಮೀಕಿ ಜಯಂತಿಯನ್ನು ರಾಜ್ಯಾದ್ಯಂತ ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಶಾಸಕರ ಭವನದಲ್ಲಿ ನಿರ್ಮಿಸಲಾಗಿರುವ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಬಳಿಕ ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಪ್ರಸಕ್ತ ಸಾಲಿನ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಭಾಜನರಾಗಿರುವ ನಾಗರಾಜು ಗಾಣದ ಹುಣಸೆ, ಪಿ.ತಿಪ್ಪೇಸ್ವಾಮಿ, ಜೆ.ಕೆ.ಮುತ್ತಮ್ಮ, ಮಳಸಿದ್ದ ಲಕ್ಷ್ಮಣ ನಾಯಕೋಡಿ, ಹಾಗೂ ಕೆ.ಉಚ್ಚಂಗಪ್ಪ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕುರುಬರನ್ನು ಪರಿಶಿಷ್ಟ ಜನಾಂಗಕ್ಕೆ ಸೇರಿಸಿದರೆ ಮೀಸಲಾತಿ ಪ್ರಮಾಣವು

ಹೆಚ್ಚಾಗಬೇಕು ಎಂದು ಅಭಿಪ್ರಾಯ ಪಟ್ಟಿದ್ದಾರೆ. ಕುರುಬರನ್ನು ಪರಿಶಿಷ್ಠ ಜನಾಂಗಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದು ಬೊಮ್ಮಾಯಿ ಸರ್ಕಾರ ಎಂದು ಸ್ಪಷ್ಟಪಡಿಸಿದ್ದಾರೆ. ಈ ನಡುವೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಮಾಯಣ ದಂತಹ ಮಹಾನ್ ಗ್ರಂಥವನ್ನು ರಚಿಸಿದ ಮಹರ್ಷಿ ವಾಲ್ಮೀಕಿ ದೇಶ ಕಂಡ ಅಪರೂಪದ ಸಾಹಿತಿ ಎಂದು ತಿಳಿಸಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

ಇದೇ ವೇಳೆ ನಾಯಕ ಸಮುದಾಯದ ಶಾಸಕರಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡುವ ಬಗ್ಗೆ ಪ್ರತಿಕ್ರಿಯೆ ನೀಡಿ, ಮುಂದಿನ ದಿನಗಳಲ್ಲಿ ಸಚಿವಸಂಪುಟ ಪುನರ್ ರಚನೆ ನಡೆಯುವ ಸಂದರ್ಭದಲ್ಲಿ ಇವರನ್ನು ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

*****************

ಮಹರ್ಷಿ ವಾಲ್ಮೀಕಿ ಅವರು ಭಾರತದ ಸಂಸ್ಕೃತಿ, ಪರಂಪರೆಯನ್ನು ಜಗತ್ತಿಗೇ ಪರಿಚಯಿಸಿಕೊಟ್ಟ ಮಹಾ ಕವಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ತಿಳಿಸಿದ್ದಾರೆ. ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಏರ್ಪಡಿಸಿದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಮಾಯಣ ಮಹಾಕಾವ್ಯವನ್ನು ಇಡೀ ವಿಶ್ವವೇ ತಲೆದೂಗುವಂತೆ ಸುಂದರವಾಗಿ ರಚಿಸಿ, ಇಡೀ ಜಗತ್ತಿಗೇ ಶ್ರೀರಾಮನ ಆದರ್ಶ ವ್ಯಕ್ತಿತ್ವವನ್ನು ಪರಿಚಯಿಸಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ್, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್,ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

*****************

ರಾಜ್ಯದ ವಿವಿಧೆಡೆ ಇಂದು ವಾಲ್ಮೀಕಿ ಜಯಂತಿಯ ಅಂಗವಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ವಾಲ್ಮೀಕಿ ಭಾವಚಿತ್ರದ ಮೆರವಣಿಗೆ,

ಸಾಂಸ್ಕೃತಿಕ ಕಾರ್ಯಕ್ರಮಗಳು ಹಮ್ಮಿಕೊಳ್ಳಲಾಗಿತ್ತು. ಬಳ್ಳಾರಿಯಲ್ಲಿ ಆದಿ ಕವಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಇಂದು ಜಿಲ್ಲಾಡಳಿತದಿಂದ ವಾಲ್ಮೀಕಿ ಅವರ ಪುತ್ಥಳಿಯನ್ನು ಸಾರೋಟಲ್ಲಿರಿಸಿ ಮೆರವಣಿಗೆ ಮಾಡಲಾಯಿತು. ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಮೆರವಣಿಗೆಗೆ ಚಾಲನೆ ನೀಡಿದರು. ದಕ್ಷಿಣ ಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮಂಗಳೂರಿನಲ್ಲಿಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಕೆ.ಪ್ರತಾಪ ಸಿಂಹ ನಾಯಕ್, ನಾವು ಜಗತ್ತಿಗೆ ನೀಡಬಲ್ಲ ಶ್ರೇಷ್ಟಕೊಡುಗೆ ಎಂದರೆ ಭಾರತೀಯ ಕುಟುಂಬ ಪದ್ಧತಿ. ಸಹಸ್ರಾರು ವರ್ಷಗಳಿಂದ ಈ ಪದ್ಧತಿಯನ್ನು ಉಳಿಸಿಕೊಳ್ಳುವ ವಿಚಾರದಲ್ಲಿ ರಾಮಾಯಾಣ, ಮಹಾಭಾರತ, ಮಹಾಕಾವ್ಯಗಳಲ್ಲಿರುವ ಜೀವನ ಮೌಲ್ಯಗಳೇ ಮೂಲ ಕಾರಣವಾಗಿದೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು ಮಾತನಾಡಿ, ಮಹರ್ಷಿ ವಾಲ್ಮೀಕಿ ಸಾಧನೆ ಹಾಗೂ ಸಮಾಜಕ್ಕೆ ನೀಡಿರುವ ಮೌಲ್ಯಯುತ ಸಂದೇಶಗಳನ್ನು ಅರಿಯಬೇಕಿದ್ದು, ಹಿಂದುಳಿದ ಸಮುದಾಯ ಶಿಕ್ಷಣ ಪಡೆಯುವ ಮೂಲಕ ಮುಖ್ಯವಾಹಿನಿಗೆ ಬರಬೇಕಿದೆ ಎಂದು ಹೇಳಿದರು. ಸಮಾರಂಭಕ್ಕೂ ಮುನ್ನ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ವಿವಿಧ ಕಲಾತಂಡಗಳೊಡನೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಯಿತು.

****************

ರಾಜ್ಯದಲ್ಲಿ ನಡೆಯುತ್ತಿರುವ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆಯ ಅವಧಿಯನ್ನು ವಿಸ್ತರಿಸಲಾಗಿದೆ. ಜಿಬಿಎ ವ್ಯಾಪ್ತಿಯಲ್ಲಿ ಇದೇ ೨೪ರವರೆಗೆ ಮತ್ತು ರಾಜ್ಯದ ಉಳಿದ ಭಾಗಗಳಲ್ಲಿ ಇದೇ ೧೨ರವರೆಗೆ ಸಮೀಕ್ಷೆ ಕರ್ತವ್ಯಗಳನ್ನು ಮುಂದುವರಿಸುವಂತೆ

ಶಾಲಾ ಶಿಕ್ಷಣ ಇಲಾಖೆಯ ಆಯುಕ್ತ ಸುರಾಳ್ಕರ್ ವಿಕಾಸ್ ಕಿಶೋರ್ ಆದೇಶ ನೀಡಿದ್ದಾರೆ. ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಶಿಕ್ಷಕರು ಸಮೀಕ್ಷೆ ಪೂರ್ಣಗೊಳ್ಳುವವರೆಗೆ ಬೆಳಿಗ್ಗೆ ೮ರಿಂದ ಮಧ್ಯಾಹ್ನ ೧ ಗಂಟೆಯ ವರೆಗೆ ಅರ್ಧ ದಿನದ ತರಗತಿಗಳಿಗೆ ಹಾಜರಾಗಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಿದ್ದಾರೆ.

****************

ಶಿಕ್ಷಣ ಇಲಾಖೆ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಶುಲ್ಕ ಹೆಚ್ಚಿಸಿರುವ ವಿರುದ್ಧ ಬಿಜೆಪಿ ಅಸಮಾಧಾನ ವ್ಯಕ್ತಪಡಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಸರ್ಕಾರಕ್ಕೆ ಈಗ ಶಿಕ್ಷಣ ಇಲಾಖೆ ಕಣ್ಣಿಗೆ ಬಿದ್ದಿದೆ ಎಂದು ದೂರಿದೆ. ರೈತರೆಂದರೆ ಕನಿಷ್ಠ ಕಾಳಜಿ ಇಲ್ಲದ ಕಾಂಗೆಸ್ ಆಡಳಿತದಿಂದಾಗಿ ರೈತರ ಆತ್ಮಹತ್ಯೆಗಳಿಗೆ ರಾಜ್ಯವು ೨ನೇ ಸ್ಥಾನ ತಲುಪಿದೆ ಎಂದು ಆರೋಪಿಸಿದೆ. ಇದು ರಾಜ್ಯವೇ ತಲೆ ತಗ್ಗಿಸುವ ವಿಚಾರ ಎಂದು ಹೇಳಿದೆ.

****************

ಹೈಕಮಾಂಡ್ ಬಯಸಿದರೆ ರಾಜ್ಯದಲ್ಲಿ ನಾಯಕತ್ವವನ್ನು ಬದಲಾಯಿಸಲು ಬಿಹಾರ ಚುನಾವಣೆಯ ಅಂತ್ಯದ ವರೆಗೆ ಕಾಯುವುದಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವೆಂಬರ್ ಕ್ರಾಂತಿಯ ವದಂತಿ ಕುರಿತಂತೆ ಪ್ರತಿಕ್ರಿಯಿಸಿ ರಾಜ್ಯದಲ್ಲಿ ಮುಖ್ಯಮಂತ್ರಿ , ಉಪಮುಖ್ಯಮಂತ್ರಿ ಸೇರಿದಂತೆ ಎಲ್ಲರೂ ಜವಾಬ್ದಾರಿಗಳನ್ನು ಹೊಂದಿದ್ದಾರೆ. ಉತ್ತರ ಕರ್ನಾಟಕ ಪ್ರದೇಶದಲ್ಲಿ ಪ್ರವಾಹ ಪರಿಸ್ಥಿತಿ ಇದ್ದು ಅದರ ಮೇಲೆ ಗಮನ ಹರಿಸಬೇಕು ಎಂದು ಹೇಳಿದ್ದಾರೆ. ರಾಜ್ಯದ ಪ್ರತಿಯೊಂದು ಬೆಳವಣಿಗೆಗಳನ್ನು ಹೈಕಮಾಂಡ್ ಗಮನಿಸುತ್ತಿದ್ದು ತಮ್ಮ ಮೊದಲ ಆದ್ಯತೆ ರಾಜ್ಯ ಅಭಿವೃದ್ಧಿ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಕೇಂದ್ರ ಜಲಶಕ್ತಿ ಇಲಾಖೆ ನೀಡುವ 'ಜಲ್ ಸಂಚಯನ್ ಜನ್ ಭಾಗಿದಾರಿ' ರಾಷ್ಟ್ರ ಪ್ರಶಸ್ತಿಗೆ ತುಮಕೂರು ಜಿಲ್ಲೆ ಭಾಜನವಾಗಿದೆ. ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಜಲಜೀವನ್ ಮಿಷನ್ ಮತ್ತು ನರೇಗಾ ಯೋಜನೆಯಡಿ ಜಲಮೂಲದ ಸಂರಕ್ಷಣೆ, ಮಣ್ಣು ನೀರು ಸಂರಕ್ಷಣೆ, ಬದುಗಳ ನಿರ್ಮಾಣ, ಕಲ್ಯಾಣಿಗಳ ಪುನಃಶ್ಚೇತನ ಸೇರಿದಂತೆ ಸುಮಾರು ೬ ಸಾವಿರದ ೫೦೦ಕ್ಕೂ ಅಧಿಕ ಕಾಮಗಾರಿಗಳನ್ನು ಕೈಗೊಂಡಿರುವುದಕ್ಕೆ ಈ ಪ್ರಶಸ್ತಿ ಲಭಿಸಿದೆ. ಪ್ರಶಸ್ತಿಯು ೨೫ ಲಕ್ಷ ರೂಪಾಯಿ ಮೊತ್ತದ ಬಹುಮಾನವನ್ನು ಒಳಗೊಂಡಿದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಭು ಜಿ, ಮಾತನಾಡಿ, ಗ್ರಾಮ ಪಂಚಾಯಿತಿ ಐನೂರು ಎಂಬ ಹೊಸ ಅಭಿಯಾನದಡಿ ಜಲಸಂರಕ್ಷಣೆಗೆ ಹೆಚ್ಚು ಒತ್ತು ನೀಡಲಾಗಿದೆ. ಅಂತರ್ಜಲ ಮಟ್ಟ ಏರಿಕೆ ಹಾಗೂ ಮಣ್ಣಿನ ಸವಕಳಿ ತಡೆಯುವಲ್ಲಿ ನಿರ್ಣಾಯಕ ಪಾತ್ರ ಪರಿಗಣಿಸಿ ಜಲ್ ಸಂಚಯನ್ ಜನ್ ಭಾಗಿದಾರಿ' ಪ್ರಶಸ್ತಿ ಲಭಿಸಿದೆ ಎಂದರು.

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರದ ಆಯುಷ್ಮಾನ್ ಭಾರತ್ ಆರೋಗ್ಯ ಮೂಲಸೌಕರ್ಯ ಮಿಷನ್ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೩೮ ಕಡೆ ಆಯುಷ್ಮಾನ್ ಭಾರತ್- ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪನೆಗೆ ಒಟ್ಟು ೨೪.೭೦ ಕೋಟಿ ರೂಪಾಯಿ ಅನುದಾನ ಮಂಜೂರಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಪಿಎಂ-ಎಬಿಐಎಂ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯ ಬಹುತೇಕ ಎಲ್ಲ ತಾಲೂಕುಗಳಿಗೂ ಹೊಸ ಆಯುಷ್ಮಾನ್ ಭಾರತ್- ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪನೆಗೆ ಅನುದಾನ ಮಂಜೂರು ಮಾಡಲಾಗಿದೆ ಎಂದು ಹೇಳಿದ್ದಾರೆ. ಆಯುಷ್ಮಾನ್ ಭಾರತ್ ಹೆಲ್ತ್ ಸೆಂಟರ್ ಸ್ಥಾಪನೆಗೆ ತಲಾ ೬೫ ಲಕ್ಷ ರೂಪಾಯಿ ಮಂಜೂರಾಗಿದ್ದು, ಅದರಡಿ ಸೂಕ್ತ ಕಟ್ಟಡ ಸೇರಿದಂತೆ

ಅಗತ್ಯ ಮೂಲಸೌಕರ್ಯ ವ್ಯವಸ್ಥೆಗಳನ್ನು ಒದಗಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

'ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿ ಹೊಸದಾಗಿ ೩೦೦ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲಾಗಿದ್ದು, ಅದರಿಂದ ಆದಾಯ ನಿರೀಕ್ಷಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಭರಮಗೌಡ ಕಾಗೆ ತಿಳಿಸಿದ್ದಾರೆ. ಹುಬ್ಬಳ್ಳಿ ಕೇಂದ್ರ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಖಾಲಿಯಿರುವ ೨೪೨ ಮಳಿಗೆಗಳನ್ನು ಶೀಘ್ರ ಹಂಚಿಕೆ ಮಾಡುವ ಮೂಲಕ ಆರ್ಥಿಕ ಸಂಪನ್ಮೂಲ ಕ್ರೋಡಿಕರಣಕ್ಕೆ ಆದ್ಯತೆ ನೀಡಲಾಗುವುದು ಎಂದು ಹೇಳಿದ್ದಾರೆ. ಇನ್ನೂ ೧ ಸಾವಿರ ಚಾಲಕರು, ನಿರ್ವಾಹಕರ ನೇಮಕಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಶೀಘ್ರ ಅನುಮತಿ ಸಿಗುವ ವಿಶ್ವಾಸ ಇದೆ' ಎಂದು ತಿಳಿಸಿದ್ದಾರೆ.

*******END********